**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಹಣಮಂತ ರುದ್ರಪ್ಪ ನಿರಾಣಿ ಇವರು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ.**

**ವಿಷಯ**

ಮಹಿಳಾ ಅಧ್ಯಯನ ವಿಷಯವನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾರಂಭಿಸುವ ಕುರಿತು

**ಉತ್ತರ**

ಸರ್ಕಾರದ ಆದೇಶ ಸಂಖ್ಯೆ ಇಡಿ 139 ಡಿಸಿಇ 2023 ದಿನಾಂಕ: 13-07-2023 ರಲ್ಲಿ 2023-24 ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತೀ ಹೆಚ್ಚು ಬೇಡಿಕೆ ಇರುವ ವಿಷಯ/ಕೋರ್ಸುಗಳನ್ನು ಹೊಸದಾಗಿ ಪ್ರಾರಂಭಿಸಲು ಹಾಗೂ ಬೇಡಿಕೆಗನುಗುಣವಾಗಿ ಹಾಲಿ ಚಾಲ್ತಿಯಲ್ಲಿರುವ ವಿಷಯಗಳಿಗೆ ಪ್ರವೇಶ ಮಿತಿಯನ್ನು ಹೆಚ್ಚಿಸಲು ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರತಿ ಶೈಕಣಿಕ ವರ್ಷಕ್ಕೆ ಖಾಯಂ ಉಪನ್ಯಾಸಕರಿಗೆ ನಿಗಧಿತ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಕೆ ಕಾರ್ಯಭಾರಕ್ಕೆ ಮುಂಬರುವ ಶೈಕ್ಷಣಿಕ ಸಾಲಿನಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿಯುನ್ನು ಪರಿಗಣಿಸಿ ಉದ್ಭವಿಸುವ ಕಾರ್ಯಭಾರಕ್ಕನುಗುಣವಾಗಿ ಹೆಚ್ಚುವರಿ ಅತಿಥಿ ಉಪನ್ಯಾಸಕರನ್ನು ಬಳಸಿಕೊಂಡು, ಈಗಾಗಲೇ ಲಭ್ಯವಿರುವ ಮೂಲಭೂತ ಸೌಕರ್ಯಗಳನ್ನು ಬಳಸಿಕೊಂಡು ಹಾಗೂ ಮೂಲಭೂತ ಸೌಕರ್ಯಗಳ ಕೊರತೆ ಇರುವ ಕೆಲವೇ ಕೆಲವು ಕಾಲೇಜುಗಳಲ್ಲಿ ಅಗತ್ಯಕ್ಕಗನುಗುಣವಾಗಿ ಎರಡು ಪಾಳಿಗಳಲ್ಲಿ ತರಗತಿಯನ್ನು ನಡೆಸಲು ಸದರಿ ಕಾಲೇಜುಗಳಲ್ಲಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಹಾಲಿ ಚಾಲ್ತಿಯಲ್ಲಿರುವ ಪ್ರವೇಶಾತಿ ನಿಯಮಗಳನ್ವಯ ಹೊಸ ವಿಷಯ/ ಕೋರ್ಸುಗಳನ್ನು ಪ್ರಾರಂಭಿಸಲು ಸರ್ಕಾರದ ಅನುಮತಿ ನೀಡಲಾಗಿರುತ್ತದೆ.

ಪ್ರಸ್ತುತ ಲಭ್ಯವಿರುವ ಉದ್ಯೋಗಾವಕಾಶಗಳು ಹಾಗೂ ಮುಂದೆ ಭವಿಷ್ಯದಲ್ಲಿ ಸೃಜಿಸುವಂತಹ ಉದ್ಯೋಗವಕಾಶಗಳನ್ನು ಗಮನದಲ್ಲಿರಿಸಿಕೊಂಡು ಮಹಿಳಾ ಅಧ್ಯಯನ ವಿಷಯವನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮುಂದಿನ ದಿನಗಳಲ್ಲಿ ಪ್ರಾರಂಭಿಸುವ ಕುರಿತು ಚಿಂತನೆ ಮತ್ತು ಚರ್ಚೆಗಳನ್ನು ನಡೆಸಿ ಹಂತ ಹಂತವಾಗಿ ಕ್ರಮವಹಿಸಲಾಗುವುದು.

ಇಡಿ 329 ಡಿಸಿಇ 2023

**(ಡಾ: ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು